# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 517(473)
ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 08-12-2023
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಡ್ಯದಲ್ಲಿ ನಡೆಸಲು ಉದ್ದೇಶಿಸಿದ್ದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮೂಂದೂಡಲು ಕಾರಣವೇನು; ಮುಂದಿನ ವರ್ಷ(2024) ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲು ಸರ್ಕಾರ ಉದ್ದೇಶಿಸಿದೆಯೇ; | ಮಂಡ್ಯದಲ್ಲಿ ನಡೆಸಲು ಉದ್ದೇಶಿಸಿದ್ದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು, ಮಂಡ್ಯ ಭಾಗದಲ್ಲಿ ಬರದ ಸ್ಥಿತಿ ರೂಪುಗೊಂಡ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸ್ವಯಂಪ್ರೇರಿತವಾಗಿ ಸಮ್ಮೇಳನವನ್ನು ತಾತ್ಕಾಲಿಕವಾಗಿ ಮುಂದೂಡಿದ್ದು, ಪರಿಸ್ಥಿತಿ ಸುಧಾರಿಸಿದ ನಂತರ ಅತಿ ಶೀಘ್ರವಾಗಿ ಸರ್ಕಾರದೊಂದಿಗೆ ಚರ್ಚಿಸಿ, ಸಮ್ಮೇಳನ ನಡೆಸುವ ದಿನಾಂಕಗಳನ್ನು ನಿಗದಿಗೊಳಿಸಿ, ಮಂಡ್ಯದಲ್ಲಿಯೇ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲಾಗುವುದು ಎಂದು ಕನ್ನಡ ಸಾಹಿತ್ಯ ಪರಿಷತ್ತು ದಿನಾಂಕ:01.12.2023ರ ಪತ್ರದಲ್ಲಿ ತಿಳಿಸಿರುತ್ತದೆ.<br><br>ಸಮ್ಮೇಳನದ ದಿನಾಂಕ ನಿಗದಿಯಾದ ನಂತರ ಅನುದಾನ ಬಿಡುಗಡೆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. |
| ಆ) | ಹಾಗಿದ್ದಲ್ಲಿ, ಯಾವ ತಿಂಗಳಿನಲ್ಲಿ ಸಮ್ಮೇಳನ ನಡೆಯಲಿದೆ; ಸರ್ಕಾರ ಸಮ್ಮೇಳನಕ್ಕೆ ಎಷ್ಟು ಅನುದಾನ ಒದಗಿಸಲಿದೆ;(ವಿವರ ನೀಡುವುದು) | |
| ಇ) | ಮೂರನೇ ವಿಶ್ವ ಕನ್ನಡ ಸಮ್ಮೇಳನವನ್ನು ನಡೆಸಲು ಸರ್ಕಾರ ಉದ್ದೇಶಿಸಿದೆಯೇ? (ಈ ಬಗ್ಗೆ ಸಂಪೂರ್ಣ ವಿವರ ನೀಡುವುದು) | 2023-24ನೇ ಸಾಲಿನ ಆಯವ್ಯಯದಲ್ಲಿ ವಿಶ್ವ ಕನ್ನಡ ಸಮ್ಮೇಳನವನ್ನು ನಡೆಸುವ ಕುರಿತು ಪ್ರಸ್ತಾಪಿಸಿರುವುದಿಲ್ಲ. |

ಸಂಖ್ಯೆ: ಕಸಂವಾ 46 ಕವಿಸ 2023

**(ಶಿವರಾಜ ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು